# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 570 (740) |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 12.12.2025 |
| ಉತ್ತರಿಸುವವರು | : | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ರಾಜ್ಯದ್ಯಂತ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮ ನೈರ್ಮಲ್ಯ ಯೋಜನೆಯನ್ನು ಜಾರಿಗೊಳಿಸಲಾಗಿದೆಯೇ: | ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ನೈರ್ಮಲ್ಯಕ್ಕಾಗಿ ಬಯಲು ಬಹಿರ್ದೆಸೆ ಮುಕ್ತ ಸುಸ್ಥಿರತೆ ಹಾಗೂ ಸ್ವಚ್ಛತೆಯ ಸುಸ್ಥಿರತೆ ಕಾಯ್ದುಕೊಳ್ಳಲು ವೈಯಕ್ತಿಕ ಗೃಹ ಶೌಚಾಲಯ, ಸಮುದಾಯ ಶೌಚಾಲಯ ನಿರ್ಮಾಣ, ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣಾ ಕಾರ್ಯಕ್ರಮಗಳನ್ನು ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿಯಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. |
| (ಆ) | ಹಾಗಿದ್ದಲ್ಲಿ, ಈವರೆಗೂ ಎಷ್ಟು ಗ್ರಾಮಗಳಲ್ಲಿ ಈ ಯೋಜನೆಗಳನ್ನು ಜಾರಿಗೊಳಿಸಲಾಗಿದೆ: (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು) | ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯು ರಾಜ್ಯದ ಎಲ್ಲಾ 26484 ಗ್ರಾಮಗಳಲ್ಲಿಯೂ ಸಹ ಜಾರಿಯಲ್ಲಿದ್ದು, ಈವರೆಗೆ 9655 ಗ್ರಾಮಗಳನ್ನು ODF Plus Model ಎಂದು ಘೋಷಿಸಲಾಗಿದೆ. **(ಜಿಲ್ಲಾವಾರು ಹಾಗೂ ಗ್ರಾಮ ಪಂಚಾಯಿತಿ / ಗ್ರಾಮವಾರು ಮಾಹಿತಿಯನ್ನು ಅನುಬಂಧ-1ರಲ್ಲಿ ನೀಡಲಾಗಿದೆ.)** |
| (ಇ) | ಘನ ಮತ್ತು ದ್ರವತ್ಯಾಜ್ಯ ಹಾಗೂ ಹಳ್ಳಿಸಂತೆ ನಿರ್ವಹಣೆಗಾಗಿ ಮಹಿಳಾ ಸ್ವ ಸಹಾಯ ಸಂಘಗಳನ್ನು ತೊಡಗಿಸಿಕೊಳ್ಳಲು ಇಚ್ಛಿಸಲಾಗಿದೆಯೇ; ಹಾಗಿದ್ದಲ್ಲಿ, ಈವರೆಗೂ ಎಷ್ಟು ಗ್ರಾಮಗಳಲ್ಲಿ ಈ ಸ್ವಸಹಾಯ ಸಂಘಗಳನ್ನು ಈ ಕಾರ್ಯದಲ್ಲಿ ತೊಡಗಿಸಿಕೊಳ್ಳಲಾಗಿದೆ? (ಗ್ರಾಮವಾರು, ಸ್ವಸಹಾಯ ಸಂಘಗಳ ಹೆಸರಿನೊಂದಿಗೆ ಮಾಹಿತಿ ನೀಡುವುದು) | ಗ್ರಾಮೀಣ ಪ್ರದೇಶದಲ್ಲಿ ಘನ ತ್ಯಾಜ್ಯ ನಿರ್ವಹಣೆಗಾಗಿ 6033 ಸ್ವ-ಸಹಾಯ ಸಂಘಗಳನ್ನು ಹಾಗೂ ಹಳ್ಳಿಸಂತೆ ನಿರ್ವಹಣೆಗಾಗಿ 128 ಸ್ವ-ಸಹಾಯ ಸಂಘಗಳನ್ನು ತೊಡಗಿಸಿಕೊಳ್ಳಲಾಗಿದೆ. **(ಜಿಲ್ಲಾವಾರು ಹಾಗೂ ಗ್ರಾಮವಾರು ಸ್ವ-ಸಹಾಯ ಸಂಘಗಳ ಮಾಹಿತಿಯನ್ನು ಅನುಬಂಧ-2ರಲ್ಲಿ ನೀಡಲಾಗಿದೆ.)** |

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು